ಸರ್ಕಾರದ ಭದ್ರತೆಯಲ್ಲಿ ತೊಡಗಿಸಬೇಕಾಗಿದ್ದು, ಇದಕ್ಕೆ ಕೆ.ಸಿ.ಸಿ. ಬ್ಯಾಂಕಿನಿಂದ ಠೇವಣಿಯನ್ನು ವಾಪಸ್ಸು ಪಡೆದು ಅದಕ್ಕೆ ಇನ್ನೂ ಹೆಚ್ಚಿನ ಆರ್ಥಿಕ ಮುಗ್ಗಟ್ಟು ಆಗುತ್ತದೆಂಬ ಕಾರಣದಿಂದ ಒಂದು ವರ್ಷದ ಅವಧಿಗೆ ವಿನಾಯ್ತಿ ಕೋರಲಾಗಿದೆ.

ಮೇಲ್ಕಂಡ ಪಟ್ಟಿಯ ಕ್ರಮ ಸಂಖ್ಯೆ 2 ರಿಂದ 14 ರವರೆಗಿನ ಹದಿಮೂರು ಪಟ್ಟಣ ಸಹಕಾರ ಬ್ಯಾಂಕುಗಳ ಸುಧಾರಣೆಗೆ ಈ ಕೆಳಕಂಡಂತೆ ಕ್ರಮಗಳನ್ನು ಕೈಗೊಳ್ಳಲಾಗಿದೆ.

ಕರ್ನಾಟಕ ಸೆಂಟ್ರಲ್ ಕೋಆಪರೇಟಿವ್ ಬ್ಯಾಂಕ್ ಧಾರವಾಡ ಇದು ಎದುರಿಸುತ್ತಿರುವ ಆರ್ಥಿಕ ತೊಂದರೆಯಿಂದಾಗಿ ಸದರಿ ಬ್ಯಾಂಕಿನಲ್ಲಿ ಇಟ್ಟಿದ್ದ ಹಣವನ್ನು ಮೇಲ್ಕಂಡ 13 ಪಟ್ಟಣ ಸಹಕಾರ ಬ್ಯಾಂಕುಗಳು ಮರಳಿ ಪಡೆದುಕೊಳ್ಳಲು ಸಾಧ್ಯವಾಗದೇ ಇರುವ ಕಾರಣಕ್ಕಾಗಿ ಆರ್ಥಿಕ ತೊಂದರೆಯನ್ನು ಎದುರಿಸುತ್ತಿವೆ. ಕೆಲವು ಸಶಕ್ತ ಪಟ್ಟಣ ಸಹಕಾರ ಬ್ಯಾಂಕುಗಳಿಂದ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಂದ ಮತ್ತು ಅಪೆಕ್ಸ್ ಬ್ಯಾಂಕಿನಿಂದ ಸಂಪನ್ಮೂಲ ಕ್ರೋಢೀಕರಿಸಿ ಪರಿಸ್ಥಿತಿಯನ್ನು ಸುಧಾರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. ಇದರ ಜೊತೆಗೆ ಸದರಿ ಬ್ಯಾಂಕುಗಳ ಸಾಲ ವಸೂಲಾತಿಯನ್ನು ಉತ್ತಮ ಪಡಿಸಿ ಗ್ರಾಹಕರ ಮತ್ತು ಬ್ಯಾಂಕಿನ ರಕ್ಷಣೆಯನ್ನು ಕಾಯ್ದುಕೊಳ್ಳುವ ದಿಸೆಯಲ್ಲಿ ಯೋಜಿತ ಕ್ರಮಗಳನ್ನು ಕೈಗೊಳ್ಳುವಂತೆ ಬ್ಯಾಂಕುಗಳಿಗೆ ಸೂಚಿಸಲಾಗಿದೆ.

ಹುಬ್ಬಳ್ಳಿ-ಧಾರವಾಡ ನಗರದಲ್ಲಿ ಪಡಿತರ ಚೀಟಿ ನೀಡಿಕೆ

1849(2179): ಶ್ರೀ ಹೊನ್ನಳ್ಳಿ ಜಬ್ಬಾರ್ ಖಾನ್ ಹೈಯತ್‌ಖಾನ್ (ಹುಬ್ಬಳ್ಳಿ) : ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಈವರೆಗೆ ಎಷ್ಟು ಜನರಿಗೆ ಪಡಿತರ ಚೀಟಿ ನೀಡಲಾಗಿದೆ (ವಿಧಾನ ಸಭಾ ಕ್ಷೇತ್ರವಾರು ವಿವರ ನೀಡುವುದು);

ಆ. ಪಡಿತರ ಚೀಟಿ ಹೊಸದಾಗಿ ಬಯಸಿ ಬಂದ ಅರ್ಜಿಗಳ ಸಂಖ್ಯೆ ಎಷ್ಟು; ಹೊಸ ಪಡಿತರ ಚೀಟಿ ಕೊರತೆ ಇರುವುದು ನಿಜವೇ?

ಶ್ರೀ ರಾಮ ಲಿಂಗರೆಡ್ಡಿ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು)

ಅ. ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಒಟ್ಟು 164775 ಪಡಿತರ ಚೀಟಿಗಳನ್ನು ನೀಡಲಾಗಿದೆ.

ವಿಧಾನಸಭಾ ಕ್ಷೇತ್ರವಾರು ವಿವರ ಈ ಕೆಳಕಂಡಂತಿದೆ:-

1.	ಧಾರವಾಡ ಸಿಟಿ	59067
2.	ಹುಬ್ಬಳ್ಳಿ ಸಿಟಿ	52140
3.	ಹುಬ್ಬಳ್ಳಿ ಗ್ರಾ	53568
	ಒಟ್ಟು	164775
ಆ)	ಧಾರವಾಡ ಹಸಿಟಿ ಕ್ಷೇತ್ರ	724
	ಹುಬ್ಬಳ್ಳಿ ಸಿಟಿ ಕ್ಷೇತ್ರ	745
	ಹುಬ್ಬಳ್ಳಿ ಗ್ರಾಮ ಕ್ಷೇತ್ರ	805
	ಒಟ್ಟು	2274

ಕಳೆದ 3 ತಿಂಗಳ ಅವಧಿಯಲ್ಲಿ ರೇಷನ್ ಕಾರ್ಡುಗಳು ಲಭ್ಯವಿರಲಿಲ್ಲ. ನವೆಂಬರ್ 2002ರಲ್ಲಿ 10000 ಕಾರ್ಡುಗಳನ್ನು ಧಾರವಾಡ ಜಿಲ್ಲೆಗೆ ಬಿಡುಗಡೆ ಮಾಡಿದ್ದು, ಈಗ ಹೊಸ ಕಾರ್ಡುಗಳ ಕೊರತೆ ಇರುವುದಿಲ್ಲ.

ಬಾಲಕಾರ್ಮಿಕ ಕಲ್ಯಾಣ

1850(2191): ಶ್ರೀ ಹೊನ್ನಳ್ಳಿ ಜಬ್ಬಾರ್ ಹೈಯತ್ ಖಾನ್ (ಹುಬ್ಬಳ್ಳಿ) : ಮಾನ್ಯ ಕಾರ್ಮಿಕ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ. ರಾಜ್ಯದಲ್ಲಿ ಬಾಲ ಕಾರ್ಮಿಕರ ಸಂಖ್ಯೆ ಎಷ್ಟು? ಜಿಲ್ಲಾವಾರು ವಿವರ ನೀಡುವುದು.

ಆ. ಬಾಲ ಕಾರ್ಮಿಕರಿಗಾಗಿ ಕಲ್ಯಾಣ ಯೋಜನೆಯನ್ನು ಸರ್ಕಾರ ಕೈಗೊಂಡಿದೆಯೆ?

ಇ. ಬಾಲ ಕಾರ್ಮಿಕರ ಕಲ್ಯಾಣಕ್ಕಾಗಿ ಜಿಲ್ಲಾ ಮಟ್ಟದಲ್ಲಿ ಸಮಿತಿ ರಚಿಸಲಾಗಿದೆಯೇ. ಇಲ್ಲವಾದಲ್ಲಿ ಕಾರಣವೇನು?

ಶ್ರೀ ಖಮರುಲ್ ಇಸ್ಲಾಂ (ಕಾರ್ಮಿಕ ಸಚಿವರು)

ಅ. ರಾಜ್ಯಾದ್ಯಂತ ಬಾಲ ಕಾರ್ಮಿಕ ಸಮೀಕ್ಷೆಯನ್ನು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ನಡೆದ 39.300 ಬಾಲ ಕಾರ್ಮಿಕರನ್ನು ಗುರುತಿಸಲಾಗಿದೆ. ಜಿಲ್ಲಾವಾರು ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಆ. ಹೌದು.

ಕೇಂದ್ರ ಸರ್ಕಾರದ ರಾಷ್ಟ್ರೀಯ ಬಾಲ ಕಾರ್ಮಿಕ ಯೋಜನೆ ಅಡಿಯಲ್ಲಿ ಏಳು ಜಿಲ್ಲೆಗಳಲ್ಲಿ ಅಂದರೆ ಬೆಂಗಳೂರು (ಗ್ರಾಮಾಂತರ), ಬೆಂಗಳೂರು (ನಗರ), ಬಿಜಾಪುರ, ಧಾರವಾಡ, ಗದಗ, ಹಾವೇರಿ, ರಾಯಚೂರು ಜಿಲ್ಲೆಗಳಲ್ಲಿ ಪ್ರತಿ ಶಾಲೆಗೆ 50 ಮಕ್ಕಳಂತೆ 190 ವಿಶೇಷ ಶಾಲೆಗಳನ್ನು ಮಂಜೂರು ಮಾಡಿದ್ದು ಅವುಗಳ ಪೈಕಿ 176 ಶಾಲೆಗಳು ನಡೆಯುತ್ತಿದ್ದು ಆ ವಿಶೇಷ ಶಾಲೆಗಳಲ್ಲಿ ಬಾಲ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸಲು ಅಂದರೆ ಅನೌಪಚಾರಿಕ ಶಿಕ್ಷಣ, ಪೌಷ್ಟಿಕ ಆಹಾರ, ಆರೋಗ್ಯ ತಪಾಸಣೆ ಮುಂತಾದವುಗಳ ಮೂಲಕ ಅವರಿಗೆ ವಿದ್ಯಾಭ್ಯಾಸವನ್ನು ಕಲ್ಪಿಸಿ ಅರ್ಹ ವಿದ್ಯಾರ್ಥಿಗಳನ್ನು ಮುಖ್ಯವಾಹಿನಿ ಶಾಲೆಗಳಿಗೆ ಸೇರಿಸಲಾಗುತ್ತಿದೆ.

ಅಲ್ಲದೆ ರಾಜ್ಯ ಸರ್ಕಾರವು ರಾಜ್ಯ ಬಾಲ ಕಾರ್ಮಿಕ ಕ್ರಿಯಾ ಯೋಜನೆ ಅಡಿಯಲ್ಲಿ ಉಳಿದ 20 ಜಿಲ್ಲೆಗಳಲ್ಲಿ ಪ್ರತಿ ಶಾಲೆಗೆ 50 ಮಕ್ಕಳಂತೆ 100 ವಿಶೇಷ ವಸತಿ ಶಾಲೆಗಳನ್ನು ಮಂಜೂರು ಮಾಡಿದ್ದು ಅವುಗಳ ಪೈಕಿ 37 ಶಾಲೆಗಳು ನಡೆಯುತ್ತಿವೆ. ಸದರಿ ವಿಶೇಷ ವಸತಿ ಶಾಲೆಗಳಲ್ಲಿ ಬಾಲ ಕಾರ್ಮಿಕರಿಗೆ ವಸತಿ, ಆಹಾರ, ಅನೌಪಚಾರಿಕ ಶಿಕ್ಷಣ ನೀಡಿ ಶಿಕ್ಷಣದ ಕಡೆ ಮನವಲಿಸಿ ಮುಖ್ಯವಾಹಿನಿ ಶಾಲೆಗಳಲ್ಲಿ ಅರ್ಹ ತಂರಗತಿಗಳಿಗೆ ದಾಖಲಿಸಿ ಅವರ ವಿದ್ಯಾಭ್ಯಾಸವನ್ನು ಮುಂದುವರೆಸುವ ಕಲ್ಯಾಣ ಕ್ರಮಗಳನ್ನು ಜರುಗಿಸಲಾಗುತ್ತಿದೆ.

ಇ. ಹೌದು ರಚಿಸಲಾಗಿದೆ.

ರಾಜ್ಯ ಬಾಲ ಕಾರ್ಮಿಕ ಕ್ರಿಯಾ ಯೋಜನೆ ಅಡಿಯಲ್ಲಿ ಬಾಲ ಕಾರ್ಮಿಕರಿಗೆ ಪುನರ್ವಸತಿ ಕಲ್ಪಿಸುವ ಸಲುವಾಗಿ ಜಿಲ್ಲಾ ಮಟ್ಟದಲ್ಲಿ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಒಂದು ಜಿಲ್ಲಾ ಮಟ್ಟದ ಸಲಹಾ ಸಮಿತಿಯನ್ನು ಹಾಗೂ ಒಂದು ಜಿಲ್ಲಾ ಮಟ್ಟದ ಕಾರ್ಯಕಾರಿ ಸಮಿತಿಯನ್ನು ರಚಿಸಲಾಗಿದೆ. ಈ ಸಮಿತಿಗಳು ಬಾಲ ಕಾರ್ಮಿಕರ ಕ್ರಿಯಾ ಯೋಜನೆಯನ್ನು ಅನುಷ್ಠಾನಗೊಳಿಸುವಲ್ಲಿ ಸಲಹೆ ಮತ್ತು ಮಾರ್ಗದರ್ಶನಗಳನ್ನು ನೀಡುತ್ತದೆ.